ಕಟ್ಟಡ ನಿರ್ಮಾಣವನ್ನು ನಿಲ್ಲಿಸಲು ಸರ್ಕಾರಕ್ಕೆ ಮನಸ್ಸಿಲ್ಲ. ಆದಕಾರಣ, ಸರ್ಕಾರದ ಧೋರಣೆಯನ್ನು ಪ್ರತಿಭಟಿಸಿ ನಾವು ಸಭಾತ್ಯಾಗ ಮಾಡುತ್ತಿದ್ದೇವೆ.

(ಭಾರತೀಯ ಜತನಾ ಪಕ್ಷದ ಮಾನ್ಯ ಸದಸ್ಯರುಗಳು ಪಕ್ಷದ ಉಪನಾಯಕರಾದ ಶ್ರೀ ಡಿ.ವಿ.ಸದಾನಂದಗೌಡರ ನೇತೃತ್ವದಲ್ಲಿ ಸಭಾತ್ಯಾಗ ಮಾಡಿದರು)

ಅಧ್ಯಕ್ಷರು: ಸರ್ಕಾರದವರು ಸದನದ ಸಮಿತಿ ರಚಿಸಲು ಒಪ್ಪಿಕೊಂಡಿರುವುದರಿಂದ ಈ ವಿಷಯವನ್ನು ಇಲ್ಲಿಗೆ ಮುಕ್ತಾಯಗೊಳಿಸುತ್ತಾ, ಸದನದವನ್ನು ಸೋಮವಾರಕ್ಕೆ ಮುಂದೂಡುತ್ತಿದ್ದೇನೆ.

(ಸದನವು ರಾತ್ರಿ 7 ಗಂಟೆ 31 ನಿಮಿಷಕ್ಕೆ ಮೂದೂಡಲ್ಪಟ್ಟ ಪುನ: ಸೋಮವಾರ 29ನೇ ಜುಲೈ 2002ರಂದು ಬೆಳಿಗ್ಗೆ 10.00 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ - I

ಸೋಮವಾರಪೇಟೆ ಆಲೂರು ಸಿದ್ದಾಪುರ ಏತ ನೀರಾವರಿ ಯೋಜನೆ

1358 (1692) ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೋಮವಾರಪೇಟೆ ತಾಲ್ಲೂಕು ಆಲೂರು ಸಿದ್ದಾಪುರ ಏತ ನೀರಾವರಿ ಯೋಜನೆಯ ವಿವರ ನೀಡುವುದು ಕಾವೇರಿ ಹಾಗೂ ಹಾರಂಗಿ ನದಿಗಳು ಹುಟ್ಟಿದರೂ ಅತಿ ಕಡಿಮೆ 1797 ಹೆಕ್ಟೇರ್ ಮಾತ್ರ ನೀರಾವರಿ ಪ್ರಯೋಜನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಆ) ಸೋಮವಾರಪೇಟೆ ತಾಲ್ಲೂಕಿನ ಬಾಣಾವರ, ಗಣಗೂರು, ಹೋಣಿಮರೂರು, ಮಾಲಂಬಿ, ಕಂತೆ ಬಸವನಹಳ್ಳಿ, ಚಿಕ್ಕಹಣಗಾಲು, ದೊಡ್ಡಹಣಗಾಲು ಹಾಗೂ ಆಲೂರು ಸಿದ್ದಾಪುರ ಗ್ರಾಮಗಳು ಪದೇ ಪದೇ ಬರಗಾಲಕ್ಕೆ ತುತ್ತಾಗುತ್ತಿದ್ದು ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ಹಿಂದಿನ ನೀರಾವರಿ ಸಚಿವರ ದಿ:28-10-96ರ ಕೋರಿಕೆಯಂತೆ ಈ ಗ್ರಾಮಗಳಿಗೆ ಹಾರಂಗಿ ಜಲಾಶಯದ ಎಡದಂಡೆ ಕಾಲುವೆಯಿಂದ ನೀರಾವರಿಗೊಳಪಡಿಸಲು ಪ್ರಸ್ತಾವನೆಯನ್ನು ಕಾರ್ಯಪಾಲಕ ಅಭಿಯಂತರರು ಹಾರಂಗಿ ಅಣೆಕಟ್ಟೆ ವಿಭಾಗ ಹುಲುಗುಂದ, ಕೊಡಗು ಇವರು ಪ್ರಸ್ತಾವನೆ ಕಳುಹಿಸಿರುವುದು ನಿಜವೆ;

ಇ) ಈ ಯೋಜನೆಯ ಬಿ.ಸಿ.ರೇಷಿಯೋ 1.21 ಆಗಿದ್ದು ಈ ಯೋಜನೆಯನ್ನು ಅನುಷ್ಠಾನಗೊಳಿಸಬಹುದಾಗಿದೆ ಎಂದು ಈ ಯೋಜನೆಗೆ ಸುಮಾರು 2950 ಲಕ್ಷ ರೂಪಾಯಿ ಖರ್ಚಾಗುತ್ತದೆ ಎಂದು ಪ್ರಸ್ತಾವನೆ ಸಲ್ಲಿಸಿದ್ದರೂ ಈ ಪ್ರಸ್ತಾವನೆಯನ್ನು ಸರ್ಕಾರ ಈವರೆಗೆ ಅನುಮೋದಿಸದೇ ಇರಲು ಕಾರಣವೇನು;

ಈ) ಹಾಗಿದ್ದರೂ ಈ ಯೋಜನೆಯನ್ನು ಯಾವಾಗ ಮಂಜೂರು ಮಾಡಲಾಗುತ್ತದೆ?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು)

ಅ) ಆಲೂರು ಸಿದ್ದಾಪುರ ಏತ ನೀರಾವರಿ ಯೋಜನೆಯ ಪ್ರಾಥಮಿಕ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು ವಿವರವಾದ ಯೋಜನಾ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ವಿವರವಾದ ವರದಿ ಬಂದ ನಂತರ ವಿವರಗಳನ್ನು ನೀಡಲಾಗುವುದು. ಹಾರಂಗಿ ಜಲಾಶಯ ಯೋಜನೆಯಿಂದ ಸೋಮವಾರಪೇಟೆ ತಾಲ್ಲೂಕಿನಲ್ಲಿ ಈವರೆಗೆ 2792 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ.

ಆ) ವಿವರವಾದ ಯೋಜನಾ ವರದಿ ಬಂದ ನಂತರ ವಿವರಣೆ ನೀಡಲಾಗುವುದು.